# ವಿಶೇಷ ಮತಗಟ್ಟೆಗಳಿಗೆ ಜಿಪಂ ಸಿಇಓ ಭೇಟಿ: ಮೆಚ್ಚುಗೆ




ಹೊಸಪೇಟೆ (ವಿಜಯನಗರ) ಮೇ.–: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಮತದಾನದ ಬಗ್ಗೆ ಪ್ರೇರಣೆ ನೀಡಲು ವಿಜಯನಗರ ಜಿಲ್ಲಾದ್ಯಂತ ವಿವಿಧೆಡೆ ವಿಶೇಷವಾಗಿ ರೂಪಿಸಿರುವ ಕೆಲವು ಮತಗಟ್ಟೆಗಳಿಗೆ ಜಿಲ್ಲಾ ಪಂಚಾಯತ್ ಸಿಇಓ ಸದಾಶಿವ ಪ್ರಭು ಬಿ ಅವರು ಮೇ 6ರಂದು ಭೇಟಿ ನೀಡಿದರು.

ಹರಪನಹಳ್ಳಿ ತಾಲ್ಲೂಕು ಪಂಚಾಯತಿ ಹಾಗೂ ಅರಣ್ಯ ಇಲಾಖೆ ಸಹಕಾರದೊಂದಿಗೆ ಹರಪನಹಳ್ಳಿ ತಾಲ್ಲೂಕು ಪಂಚಾಯಿತಿ ಕಚೇರಿಯ ಸಾಮರ್ಥ್ಯ ಸೌಧದ ತರಬೇತಿ ಕೇಂದ್ರದಲ್ಲಿ ಸ್ಥಾಪನೆ ಮಾಡಲಾಗಿರುವ ಅರಣ್ಯ ವಿಷಯಾಧರಿತ ಮತಗಟ್ಟೆ ಕೇಂದ್ರಕ್ಕೆ ಭೇಟಿ ನೀಡಿ ಮಾಹಿತಿ ಪಡೆದರು.

ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ ಅರಣ್ಯ ವಿಷಯಾಧರಿತ ಮತಗಟ್ಟೆ ಸ್ಥಾಪನೆ ಮಾಡಿ ಹಲವು ವಿಷಯಗಳ ಕುರಿತು ಮಾಹಿತಿ ಹಾಗೂ ಆಕರ್ಷಕ ಬಣ್ಣಬಣ್ಣದ ತೋರಣಗಳಿಂದ ಶೃಂಗಾರ ಮಾಡಿರುವುದು ಮತದಾರರ ಹಾಗೂ ನೋಡುಗರ ಮನಸೂರೆಗೊಳಿಸುತ್ತಿದೆ. ಮೇ 07ರಂದು ಪ್ರತಿಯೊಬ್ಬರು ಮತದಾನ ಮಾಡಬೇಕು ಎಂದು ಸಾರ್ವಜನಿಕರಲ್ಲಿ ಇದೆ ವೇಳೆ ಸಿಇಓ ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹರಪನಹಳ್ಳಿ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ್ ವೈ.ಎಚ್., ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು. ಸಖಿ ಮತಗಟ್ಟೆಗಳಿಗೂ ಭೇಟಿ: ಹರಪನಹಳ್ಳಿ ತಾಲೂಕಿನ ಬೆಣ್ಣಿಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮತಗಟ್ಟೆ ಸಂಖ್ಯೆ 131 ಮತ್ತು 132 ಸಖಿ ಮತಗಟ್ಟೆಗಳಿಗೆ ಸಹ ಸಿಇಓ ಅವರು ಭೇಟಿ ನೀಡಿ ಮತಗಟ್ಟೆಗಳಲ್ಲಿನ ಮೂಲಭೂತ ಸೌಕರ್ಯಗಳ ವ್ಯವಸ್ಥೆಯ ಬಗ್ಗೆ ಪರಿಶೀಲಿಸಿದರು. ಇದೆ ವೇಳೆ ಸಖಿ ಮತಗಟ್ಟೆಯಲ್ಲಿನ ಅಲಂಕಾರ, ಕುಡಿಯುವ ನೀರಿನ ವ್ಯವಸ್ಥೆ ಮತ್ತು ಅಚ್ಚುಕಟ್ಟಾದ ಶೌಚಾಲಯದ ವ್ಯವಸ್ಥೆಯುನ್ನು ವೀಕ್ಷಿಸಿ ಸ್ಥಳದಲ್ಲಿ ಹಾಜರಿದ್ದ ಪಿಡಿಓ ಅವರ ಕಾರ್ಯವೈಖರಿಯ ಬಗ್ಗೆ ಪ್ರಶಂಶೆ ವ್ಯಕ್ತಪಡಿಸಿದರು.

# ಇಂದು ಮತದಾನ: ಮತದಾರರ ಭಾವಚಿತ್ರದ ಗುರುತಿನ ಚೀಟಿಗೆ ಪರ್ಯಾಯ ದಾಖಲೆಗಳು

ಹೊಸಪೇಟೆ (ವಿಜಯನಗರ) ಮೇ. : ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಹಿನ್ನೆಲೆಯಲ್ಲಿ ಮೇ 7ರಂದು ಬೆಳಗ್ಗೆ 7 ರಿಂದ ಸಂಜೆ 6 ಗಂಟೆಯವರೆಗೆ ಮತದಾನ ನಡೆಯಲಿದ್ದು ಮತದಾರರ ಭಾವಚಿತ್ರವಿರುವ ಗುರುತಿನ ಚೀಟಿಗೆ ಪರ್ಯಾಯ ದಾಖಲೆಗಳ ಮೂಲಕವು ಸಹ ಮತ ಚಲಾವಣೆ ಮಾಡಬಹುದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ತಿಳಿಸಿದ್ದಾರೆ.

ಮತದಾರರ ಪಟ್ಟಿಯಲ್ಲಿ ನೋಂದಾಯಿತ ಮತದಾರರು ಮತದಾರರ ಭಾವಚಿತ್ರವಿರುವ ಗುರುತಿನ ಚೀಟಿ ಹೊರತುಪಡಿಸಿ ಆಧಾರ್ ಕಾರ್ಡ್, ನರೇಗಾ ಜಾಬ್‌ಕಾರ್ಡ್, ಬ್ಯಾಂಕ್ ಅಂಚೆ ಕಚೇರಿ ನೀಡಿರುವ ಭಾವಚಿತ್ರವಿರುವ ಪಾಸ್‌ಬುಕ್, ಕಾರ್ಮಿಕ ಸಚಿವಾಲಯದಿಂದ ನೀಡಿರುವ ಆರೋಗ್ಯ ವಿಮೆ ಕಾರ್ಡ್, ಚಾಲನಾ ಪರವಾನಗಿ (ಡ್ರೈವಿಂಗ್ ಲೈಸೆನ್ಸ್), ವಿಶೇಷ ಚೇತನರ ಗುರುತಿನ ಚೀಟಿ, ಪ್ಯಾನ್‌ಕಾರ್ಡ್, ಎಂ.ಪಿ.ಆರ್‌ನ ಅಡಿಯಲ್ಲಿ ಆರ್.ಜಿ.ಐ ನೀಡಿರುವ ಸ್ಮಾರ್ಟ್‌ಕಾರ್ಡ್, ಭಾರತೀಯ ಪಾಸ್ ಪೋರ್ಟ್, ಭಾವಚಿತ್ರವಿರುವ ಪಿಂಚಣಿ ದಾಖಲೆ, ಕೇಂದ್ರ/ರಾಜ್ಯ/ಪಿ.ಎಸ್.ಯು ಗಳ ಸೇವಾ ಗುರುತಿನ ಚೀಟಿ, ಎಂ.ಪಿ/ಎಂ.ಎಲ್.ಎ/ಎಂ.ಎಲ್.ಸಿ ಗಳಿಗೆ ನೀಡಿರುವ ಅಧಿಕೃತ ಗುರುತಿನ ಚೀಟಿಯಂತಹ ಪರ್ಯಾಯ ದಾಖಲೆಗಳನ್ನು ಮತಗಟ್ಟೆಗಳಲ್ಲಿ ತೋರಿಸಿ ಮತದಾನ ಮಾಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಬಳ್ಳಾರಿ ಲೋಕಸಭಾ ಕ್ಷೇತ್ರಕ್ಕೆ ಮೇ 7ರಂದು ಮತದಾನ ನಡೆಯಲಿದ್ದು, ಮೇ 6ರಂದು ಮಸ್ಟರಿಂಗ್ ಕಾರ್ಯ ಮತ್ತು ಜೂನ್ 4ರಂದು ಮತ ಎಣಿಕೆ ನಡೆಯಲಿದೆ.

ಒಟ್ಟು 11,28,835 ಮತದಾರರು: 9 ಬಳ್ಳಾರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿಸಿದಂತೆ ಹಡಗಲಿ ಕ್ಷೇತ್ರದಲ್ಲಿ 218, ಹಗರಿಬೊಮ್ಮನಹಳ್ಳಿ ಕ್ಷೇತ್ರದಲ್ಲಿ 254, ವಿಜಯನಗರ ಕ್ಷೇತ್ರದಲ್ಲಿ 259, ಕೂಡ್ಲಿಗಿ ಕ್ಷೇತ್ರದಲ್ಲಿ 250 ಮತ್ತು 13 ದಾವಣಗೆರೆ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಹರಪನಹಳ್ಳಿ ಕ್ಷೇತ್ರದಲ್ಲಿ 253 ಸೇರಿ ಒಟ್ಟು 1234 ಮತಗಟ್ಟೆಗಳಿದ್ದು ಅಂತಿಮ ಮತದಾರರ ಪಟ್ಟಿಯಂತೆ 5,62,166 ಪುರುಷ ಮತದಾರರು, 5,66,527 ಮಹಿಳಾ ಮತದಾರರು ಹಾಗೂ 142 ಇತರೆ ಮತದಾರರು ಸೇರಿದಂತೆ ಒಟ್ಟು 11,28,835 ಮತದಾರರಿದ್ದಾರೆ.

ಭಾರತ ಚುನಾವಣಾ ಆಯೋಗದ ನಿರ್ದೇಶನಗಳನ್ವಯ ಎಲ್ಲಾ ಮತಗಟ್ಟೆಗಳಲ್ಲಿ ಮತದಾರರಿಗೆ ಅನುಕೂಲವಾಗಲು ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕುಡಿಯುವ ನೀರು, ವಿಕಲಚೇತನರಿಗೆ ರೇಲಿಂಗ್ ಸಹಿತ ರಾಂಪ್, ನೆರಳು ಹಾಗೂ ವಿದ್ಯುತ್ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಕಡ್ಡಾಯವಾಗಿ ಮತದಾನ ಮಾಡಬೇಕು: ಎಸ್. ಎಂ. ಕುಲಕರ್ಣಿ

ಬೆಳಗಾವಿ 5– ಹಿಂದು ಸಂಸ್ಕೃತಿ, ಸನಾತನ ಧರ್ಮ ಉಳಿಸುವ ದೃಷ್ಟಿಯಿಂದ ಇದೇ ದಿ. 7 ಮಂಗಳವಾರದಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಮತದಾನ ಮಾಡಬೇಕು. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಬೆಳಗಾವಿ ಜಿಲ್ಲಾ ಅಖಿಲ ಬ್ರಾಹ್ಮಣ ಸಮಾಜದ ವತಿಯಿಂದ ಎಸ್. ಎಂ. ಕುಲಕರ್ಣಿಯವರು ಮತದಾರರಲ್ಲಿ ಕೋರಿದ್ದಾರೆ.

## ಇಂದು ಬಸ್‌ಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯ

ವಿಜಯಪುರ ಮೇ 6: ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಹಿನ್ನೆಲೆಯಲ್ಲಿ ಮತಗಟ್ಟೆಗಳಿಗೆ ಸಿಬ್ಬಂದಿಗಳನ್ನು ಕರೆದೊಯ್ಯಲು 259 ಬಸ್ ಗಳನ್ನು ವಿಜಯಪುರ ವಿಭಾಗದ ಎಲ್ಲಾ ಘಟಕಗಳಿಂದ ಸಾಂದರ್ಭಿಕ ಒಪ್ಪಂದದ ಮೇಲೆ ಪೂರೈಸಲಾಗುತ್ತಿರುವುದರಿಂದ ಮೇ.7 ರಂದು ಸ್ಥಳೀಯ ಸಾರಿಗಗಳ ಕಾರ್ಯಾಚರಣೆಯಲ್ಲಿ ವ್ಯತ್ಯವವಾಗುತ್ತದೆ.

ಆದ ಕಾರಣ ಸಾರ್ವಜನಕರು ಪ್ರಯಾಣಿಕರು ಸಹಕರಿಸಬೇಕು ಎಂದು ವಿಜಯಪುರ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಗಮದ ವಿಭಾಗೀಯ ನಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ ಲೋಕಸಭೆ ಕ್ಷೇತ್ರ ಚುನಾವಣೆ; ಅಚ್ಚುಕಟ್ಟಾಗಿ ನಡೆದ ಮಸ್ಟರಿಂಗ್ ಕಾರ್ಯ ಮತಗಟ್ಟೆಗಳತ್ತ ತೆರಳಿದ ಸಿಬ್ಬಂದಿ, ಮೇ 07 ರ ಮತದಾನ ಕಾರ್ಯಕ್ಕೆ ಸಕಲ ಸಜ್ಜು

(1 ನೇ ಪುಟದಿಂದ)

ಓಆರೆಸ್, ಆಂಬುಲೆನ್ಸ್ ವ್ಯವಸ್ಥೆ ಮಾಡಲಾಗಿತ್ತು.

ಚುನಾವಣಾ ಮಸ್ಟರಿಂಗ್ ಕೆಲಸ ವೀಕ್ಷಿಸಿದ ಚುನಾವಣಾ ಸಾಮಾನ್ಯ ವೀಕ್ಷಕರು, ಜಿಲ್ಲಾಧಿಕಾರಿಗಳು: ಬಳ್ಳಾರಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಳ್ಳಾರಿ ಕ್ಷೇತ್ರದ ಸಾಮಾನ್ಯ ವೀಕ್ಷಕರಾದ ಚಂದ್ರಶೇಖರ್ ಸಖಮುರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಇಂದು, ನಗರದ ಕೋಟೆ ಪ್ರದೇಶದ ಸೆಂಟ್ ಜಾನ್ಸ್ ಕಂಪೊ?ಸಿಟ್ ಜ್ಯೂನಿಯರ್ ಕಾಲೇಜಿನ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಮಸ್ಟರಿಂಗ್ ಕೆಲಸವನ್ನು ಪರಿಶೀಲನೆ ನಡೆಸಿದರು.

ಪ್ರಸ್ತುತ ಜಿಲ್ಲೆಯಲ್ಲಿ ಬಿರು ಬಿಸಿಲಿದೆ, ಅಧಿಕಾರಿ, ಸಿಬ್ಬಂದಿಗಳು ತಮ್ಮ ಆರೋಗ್ಯದ ಕಡೆಗೂ ಗಮನವಿರಿಸಿಕೊಂಡು, ಯಾವುದೇ ಆತಂಕವಿಲ್ಲದೆ, ಧೈರ್ಯದಿಂದ ಹಾಗೂ ಪ್ರಾಮಾಣಿಕತೆಯಿಂದ ಚುನಾವಣಾ ಕರ್ತವ್ಯ ನಿರ್ವಹಿಸುವಂತೆ ನೈತಿಕ ಸ್ಥೈರ್ಯ ತುಂಬಿದರು.

ಚುನಾವಣೆ ಕೆಲಸವನ್ನು ಯಾವುದೇ ಲೋಪ ದೋಷಗಳು ಆಗದಂತೆ ಚುನಾವಣೆ ನಿಯೋಜಿತವಾದ ಮತಗಟ್ಟೆ ಅಧಿಕಾರಿಗಳು, ಸಹಾಯಕ ಮತಗಟ್ಟೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.ಈ ಬಾರಿ ಬಿಸಿಲಿನ ತಾಪಮಾನಜಾಸ್ತಿಯಾಗಿರುವುದರಿಂದ, ಮತಗಟ್ಟೆ ಅಧಿಕಾರಿಗಳು ಹೆಚ್ಚಿನ ಕಾಳಜಿ ವಹಿಸಲು ತಿಳಿಸಿದರು.

ಇದಕ್ಕೂ ಮುನ್ನ ಸಂಡೂರು ಕ್ಷೇತ್ರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ವೀಕ್ಷಿಸಿದರು.

ಅಚ್ಚುಕಟ್ಟಾದ ವ್ಯವಸ್ಥೆ: ನಗರದ ವಿವಿಧ ಶಾಲಾ ಕಾಲೇಜು ಆವರಣದಲ್ಲಿ ಏರ್ಪಡಿಸಲಾದ ಮಸ್ಟರಿಂಗ್ ಕಾರ್ಯ ಯಶಸ್ವಿಯಾಗಿ, ಯಾವುದೇ ಗೊಂದಲಕ್ಕೆ ಆಸ್ಪದವಿಲ್ಲದಂತೆ ನೆರವೇರಿಸಲು ಪೂರ್ವಭಾವಿಯಾಗಿ ಯೋಜನೆ ರೂಪಿಸಿ, ಅದರಂತೆಯೇ ಕಾರ್ಯಗತಗೊಳಿಸಲಾಯಿತು. ಚುನಾವಣಾ ಸಾಮಗ್ರಿ ವಿತರಣೆ, ಮತಯಂತ್ರಗಳ ವಿತರಣೆ, ಚುನಾವಣೆಗೆ ಮತಗಟ್ಟೆಗಳಿಗೆ ನಿಯೋಜನೆ, ಚುನಾವಣಾ ಕರ್ತವ್ಯಕ್ಕೆ ತೆರಳಲು ಆಗಮಿಸಿದ್ದ ಅಧಿಕಾರಿ, ಸಿಬ್ಬಂದಿಗಳಿಗೆ ಕಾಲೇಜು ಆವರಣದಲ್ಲಿ ಕುಡಿಯುವ ನೀರು, ನೆರಳಿನ ವ್ಯವಸ್ಥೆ ಹಾಗೂ ಉಟೋಪಹಾರದ ವ್ಯವಸ್ಥೆ ಕೈಗೊಳ್ಳಲಾಯಿತು. ಮತಗಟ್ಟೆಗಳತ್ತ ತೆರಳುವ ಮುನ್ನ ಮಧ್ಯಾಹ್ನದ ಊಟ ಪೂರೈಸಿಕೊಂಡು ಹೋಗುವ ರೀತಿ ವ್ಯವಸ್ಥೆ ಮಾಡಲಾಯಿತು. ಮಧ್ಯಾಹ್ನದ ಊಟಕ್ಕೆ ಚಪಾತಿ, ಕಾಳು ಪಲ್ಯೆ, ಅನ್ನ ಸಾಂಬಾರ್ ಜೊತೆಗೆ, ಪಾಯಸದ ಸಿಹಿ ತಿನಿಸಿನ ವ್ಯವಸ್ಥೆ ಮಾಡಲಾಗಿತ್ತು. ಊಟದ ವಿತರಣೆ ಸ್ಥಳದಲ್ಲಿ ಗೊಂದಲ ಉಂಟಾಗದಂತೆ, ಸಾಕಷ್ಟು ಸಂಖ್ಯೆಯಲ್ಲಿ ಕೌಂಟರ್ಗಳನ್ನು ತೆರೆದು, ಸರದಿ ಸಾಲಿನಲ್ಲಿ ಬಂದು ಊಟ ಸ್ವೀಕರಿಸಲು ವ್ಯವಸ್ಥೆಗೊಳಿಸಲಾಗಿತ್ತು.

ಮತದಾನ ಕಾರ್ಯಕ್ಕೆ ನೇಮಕಗೊಂಡಿರುವ ಹಲವು ಅಧಿಕಾರಿ, ಸಿಬ್ಬಂದಿಗಳೂ ಕೂಡ ಮಸ್ಟರಿಂಗ್ ಕಾರ್ಯಕ್ಕೆ ಕೈಗೊಂಡ ವ್ಯವಸ್ಥೆ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು. ಮಧ್ಯಾಹ್ನದ ಊಟ ಸವಿದ ಅಧಿಕಾರಿ, ಸಿಬ್ಬಂದಿಗಳು, ತಮಗೆ ನಿಯೋಜಿಸಲಾದ ಮತಗಟ್ಟೆಗಳಿಗೆ ಆಯಾ ಮಾರ್ಗದ ವಾಹನಗಳ ಮೂಲಕ ತೆರಳಿದರು.

1219 ಮತಗಟ್ಟೆಗಳು: ಜಿಲ್ಲೆಯಲ್ಲಿ ಒಟ್ಟು 1,219 ಮತಗಟ್ಟೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಕಂಪ್ಲಿ–242, ಸಿರುಗುಪ್ಪ–228, ಬಳ್ಳಾರಿ ಗ್ರಾಮೀಣ–235, ಬಳ್ಳಾರಿ ನಗರ–261 ಹಾಗೂ ಸಂಡೂರು ಕ್ಷೇತ್ರದಲ್ಲಿ 253 ಮತಗಟ್ಟೆಗಳಿವೆ. ಜಿಲ್ಲೆಯ 5 ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಒಟ್ಟು 299 ಸೂಕ್ಷ್ಮ ಹಾಗೂ 69 ಮತಗಟ್ಟೆಗಳನ್ನು ಅತಿಸೂಕ್ಷ್ಮ ಎಂದು ಗುರುತಿಸಲಾಗಿದೆ. ಒಟ್ಟಾರೆ ಬಳ್ಳಾರಿ ಲೋಕಸಭೆ ಕ್ಷೇತ್ರ ವ್ಯಾಪ್ತಿಯ 1972 ಮತಗಟ್ಟೆಗಳಿಗೆ 2506 (ಬ್ಯಾಲೆಟ್ ಯುನಿಟ್), 2767 (ಕಂಟ್ರೋಲ್ ಯುನಿಟ್) ಮತ್ತು 2630 (ವಿ.ವಿ.ಪ್ಯಾಟ್)ಗಳನ್ನು ಬಳಸಲಾಗುತ್ತಿದೆ.

5952 ಸಿಬ್ಬಂದಿ ಮತಗಟ್ಟೆ ಕರ್ತವ್ಯಕ್ಕೆ ನೇಮಕ: ಜಿಲ್ಲೆಯಲ್ಲಿ ಮತದಾನ ಕಾರ್ಯ ಸಮರ್ಪಕವಾಗಿ ಜರುಗಿಸಲು ಒಟ್ಟು 5952 ಅಧಿಕಾರಿ, ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಮತಗಟ್ಟೆಗಳಲ್ಲಿ ಕರ್ತವ್ಯ ನಿರ್ವಹಿಸಲು 1,395 ಪಿ.ಆರ್.ಓ., 1,395 ಎ.ಪಿ.ಆರ್.ಓ., 2,790 ಪಿ.ಓ ಹಾಗೂ 372 ಮೈಕ್ರೋ ಅಬ್ಸರ್ವರ್ಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಕಂಪ್ಲಿ ಕ್ಷೇತ್ರಕ್ಕೆ 1183, ಸಿರುಗುಪ್ಪ–1097, ಬಳ್ಳಾರಿ ಗ್ರಾಮೀಣ–1196, ಬಳ್ಳಾರಿ ನಗರ–1261 ಹಾಗೂ ಸಂಡೂರು ಕ್ಷೇತ್ರಕ್ಕೆ 1215 ಸಿಬ್ಬಂದಿಗಳು ಮತದಾನ ದಿನದ ಕಾರ್ಯಕ್ಕೆ ನಿಯೋಜಿತಗೊಂಡಿದ್ದಾರೆ.

ಬಳ್ಳಾರಿ ಲೋಕಸಭಾ ಕ್ಷೇತ್ರದಲ್ಲಿ 18,84,469 ಮತದಾರರು: ಬಳ್ಳಾರಿ (ವಿಜಯನಗರ ಒಳಗೊಂಡಂತೆ) ಲೋಕಸಭೆ ಕ್ಷೇತ್ರದಲ್ಲಿ 92,92,74 ಪುರುಷ ಮತದಾರರು ಮತ್ತು 9,54,929 ಮಹಿಳಾ ಮತದಾರರು, 266 ತೃತೀಯ ಲಿಂಗಿ ಮತದಾರರು ಸೇರಿ ಒಟ್ಟು 18,84,469 ಮತದಾರರು ಮತದಾನದ ಹಕ್ಕು ಚಲಾಯಿಸಲಿದ್ದಾರೆ. ಇದರಲ್ಲಿ 61,006 ಯುವ ಮತದಾರರು ಪ್ರಥಮ ಬಾರಿಗೆ ತಮ್ಮ ಮತದಾನದ ಹಕ್ಕು ಚಲಾಯಿಸಲಿದ್ದಾರೆ.

ಮತದಾನ ಕಾರ್ಯ ಮೇ 07 ರಂದು ಬೆಳಿಗ್ಗೆ 07ಗಂಟೆಯಿಂದ ಸಂಜೆ 06 ಗಂಟೆಯವರೆಗೆ ನಡೆಯಲಿದ್ದು, ಸುಗಮ ಮತದಾನಕ್ಕೆ ಅಗತ್ಯ ವ್ಯವಸ್ಥೆಯನ್ನು ಜಿಲ್ಲಾಡಳಿತ ಕೈಗೊಂಡಿದೆ. ಮತದಾರರು ತಪ್ಪದೆ ತಮ್ಮ ಮತದಾನದ ಹಕ್ಕು ಚಲಾಯಿಸುವ ಮೂಲಕ ಪ್ರಜಾಪ್ರಭುತ್ವ ಹಬ್ಬದ ಸಂಭ್ರಮದಲ್ಲಿಪಾಲ್ಗೊಳ್ಳುವಂತಾಗಲಿ ಎಂಬುದು ಜಿಲ್ಲಾಡಳಿತದ ಆಶಯವಾಗಿದೆ.

# ಮಸ್ಟರಿಂಗ್ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಭೇಟಿ ಪರಿಶೀಲನೆ



ಹೊಸಪೇಟೆ (ವಿಜಯನಗರ) ಮೇ.–: ವಿಜಯನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಸ್ಟರಿಂಗ್ ಕೇಂದ್ರವಾದ ಹೊಸಪೇಟೆ ನಗರದ ಸಂಡೂರ ರಸ್ತೆಯಲ್ಲಿರುವ ಎಲ್‌ಎಫ್‌ಎಸ್ ಶಾಲಾ ಆವರಣಕ್ಕೆ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ಮೇ 6ರಂದು ಬೆಳಗ್ಗೆ ಭೇಟಿ ನೀಡಿ ಪರಿಶೀಲಿಸಿದರು.

ಮತಯಂತ್ರಗಳು ಸೇರಿದಂತೆ ವಿವಿಧ ಚುನಾವಣಾ ಸಾಮಗ್ರಿಗಳ ವಿತರಣೆಗೆ ಸಿದ್ಧತೆ ಮಾಡಿಕೊಂಡ ಮಸ್ಟರಿಂಗ್ ಕೇಂದ್ರದಲ್ಲಿನ ವ್ಯವಸ್ಥೆಯನ್ನು ಇದೆ ವೇಳೆ ಜಿಲ್ಲಾಧಿಕಾರಿಗಳು ಪರಿಶೀಲಿಸಿದರು. ಮಸ್ಟರಿಂಗ್ ಕೇಂದ್ರದಲ್ಲಿ ಊಟದ ಕೌಂಟರನತ್ತ ತೆರಳಿ ಅಲ್ಲಿನ ವ್ಯವಸ್ಥೆಯ ವೀಕ್ಷಣೆ ನಡೆಸಿದರು.

ಕೂಡ್ಲಿಗಿ ಕ್ಷೇತ್ರಕ್ಕೂ ಭೇಟಿ: ಮಧ್ಯಾಹ್ನ ವೇಳೆ ಜಿಲ್ಲಾಧಿಕಾರಿಗಳು ಕೂಡ್ಲಿಗಿ ವಿಧಾನಸಭಾ ಕ್ಷೇತ್ರಕ್ಕೆ ತೆರಳಿದರು. ಕೂಡ್ಲಿಗಿ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರಿ ಯುನಿಟೆಡ್ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಮಸ್ಟರಿಂಗ್ ಕೇಂದ್ರದಲ್ಲಿನ ವ್ಯವಸ್ಥೆಯ ವೀಕ್ಷಣೆ ನಡೆಸಿದರು.

ಅಧಿಕಾರಿಗಳು ಸಿಬ್ಬಂದಿಗೆ ಸೂಚನೆ: ಮತಗಟ್ಟೆಗಳಿಗೆ ನಿಯೋಜನೆಗೊಂಡ ಅಧಿಕಾರಿಗಳು ಮತ್ತು ಸಿಬ್ಬಂದಿಯು ಚುನಾವಣಾ ಆಯೋಗದ ನಿರ್ದೇಶನುಸಾರ ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸಬೇಕು. ಬಿಸಿಲು ಹೆಚ್ಚಿರುವುದರಿಂದ ಆರೋಗ್ಯದ ಬಗ್ಗೆ ಗಮನ ಹರಿಸಬೇಕು. ಏನಾದರು ಗೊಂದಲಗಳಿದ್ದಲ್ಲಿ ಕೂಡಲೇ ಮೇಲಧಿಕಾರಿಗಳಿಗೆ ಸಂಪರ್ಕಿಸಿ ಸಲಹೆಗಳನ್ನು ಪಡೆದು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸಲಹೆ ಮಾಡಿದರು.

ಮತದಾನಕ್ಕೆ ಸುವ್ಯವಸ್ಥೆ: ಇದೆ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿಗಳು, ಬಳ್ಳಾರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಹಡಗಲಿ, ಹಗರಿಬೊಮ್ಮನಹಳ್ಳಿ, ವಿಜಯನಗರ, ಕೂಡ್ಲಿಗಿ ಕ್ಷೇತ್ರದಲ್ಲಿ ಹಾಗೂ ದಾವಣಗೆರೆ ಲೋಕಸಭಾ ವ್ಯಾಪ್ತಿಯ ಹರಪನಹಳ್ಳಿ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 11,28,835 ಮತದಾರರು ಮೇ 7ರಂದು ತಮ್ಮ ಮತ ಹಕ್ಕನ್ನು ಚಲಾಯಿಸಲಿದ್ದಾರೆ. ಇದಕ್ಕಾಗಿ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಅಚ್ಚುಕಟ್ಟಾದ ವ್ಯವಸ್ಥೆ ಮಾಡಲಾಗಿದೆ. ಹಡಗಲಿ ಕ್ಷೇತ್ರದಲ್ಲಿ 1044, ಹಗರಿಬೊಮ್ಮನಹಳ್ಳಿ ಕ್ಷೇತ್ರದಲ್ಲಿ 1200, ವಿಜಯನಗರ ಕ್ಷೇತ್ರದಲ್ಲಿ 1216, ಕೂಡ್ಲಿಗಿ ಕ್ಷೇತ್ರದಲ್ಲಿ 1200 ಮತ್ತು ಹರಪನಹಳ್ಳಿ ಕ್ಷೇತ್ರದಲ್ಲಿ 1212 ಸೇರಿ ಒಟ್ಟು 5872 ಸಿಬ್ಬಂದಿಯನ್ನು ಚುನಾವಣೆ ಕಾರ್ಯಕ್ಕೆ ನಿಯೋಜಿಸಲಾಗಿದೆ. ಒಟ್ಟು 244 ಮತಗಟ್ಟೆ ಕೇಂದ್ರಗಳಲ್ಲಿ ವೆಬ್‌ಕ್ಯಾಸ್ಟಿಂಗ್ ಮತ್ತು 267 ಮೈಕ್ರೋ ವೀಕ್ಷಕರನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದರು. ಲೋಕಸಭಾ ಚುನಾವಣೆಯಲ್ಲಿ ಮತದಾನ ಮಾಡಲು ಉತ್ಸುಕರಾಗಿ ಹೊಸದಾಗಿ 33,610 ಯುವ ಮತದಾರರು ಮತ್ತು 16,060 ವಿಕಲಚೇತನ ಮತದಾರರು ಮತದಾರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಿದ್ದಾರೆ ಎಂದು ತಿಳಿಸಿದರು.

ಹಡಗಲಿ ಕ್ಷೇತ್ರದಲ್ಲಿ 39, ಹಗರಿಬೊಮ್ಮನಹಳ್ಳಿ ಕ್ಷೇತ್ರದಲ್ಲಿ 52, ವಿಜಯನಗರ ಕ್ಷೇತ್ರದಲ್ಲಿ 57, ಕೂಡ್ಲಿಗಿ ಕ್ಷೇತ್ರದಲ್ಲಿ 52 ಮತ್ತು ಹರಪನಹಳ್ಳಿ ಕ್ಷೇತ್ರದಲ್ಲಿ 52 ಸೇರಿ ಒಟ್ಟು 1234 ಮತಗಟ್ಟೆಗಳಿಗೆ 252 ರೂಟಗಳ ಮೂಲಕ ನಿಯೋಜಿಸಿದ ಸಿಬ್ಬಂದಿಗೆ ಮತಗಟ್ಟೆ ಕೇಂದ್ರಗಳಿಗೆ ತೆರಳಲು ಸಾರಿಗೆ ಬಸ್ಸಿನ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಈ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಮಹಮ್ಮದ್ ಅಕ್ರಮ ಅಲಿ ಷಾ, ತಹಸೀಲ್ದಾರ ಶ್ರುತಿ ಹಾಗೂ ಇನ್ನಿತರರು ಇದ್ದರು.

# ಮತದಾನ ಜಾಗೃತಿಯ ಐತಿಹಾಸಿಕ ಪಾರಂಪರಿಕ ಟಾಂಗಾ ಅಭಿಯಾನಕ್ಕೆ ಚಾಲನೆ



ವಿಜಯಪುರ ಮೇ.–: ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಶನಿವಾರ ಸಂಜೆ ನಗರದ ಸೆಟ್ ಲೈಟ್ ಬಸ್ ನಿಲ್ದಾಣ ( ಹೊಸ ಬಸ್ ನಿಲ್ದಾಣ)ದಿಂದ ಹಮ್ಮಿಕೊಂಡ ಐತಿಹಾಸಿಕ ಪಾರಂಪರಿಕ ಟಾಂಗಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಸಾರ್ವತ್ರಿಕ ಲೋಕಸಭಾ ಚುನಾವಣೆ 2024 ರ ಮತದಾನ ಮಹತ್ವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಂಡ ಜಾಗೃತಿಯ ಟಾಂಗಾ ಅಭಿಯಾನವನ್ನು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ವಿಶೇಷವಾಗಿ ಅಲಂಕೃತಗೊಂಡ ಪಾರಂಪರಿಕ ಟಾಂಗಾದಲ್ಲಿ ಕುಳಿತು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಮತದಾನ ಜಾಗೃತಿ ವಿವಿಧ ಘೋಷಣೆಗಳನ್ನೊಂಡ ಅಲಂಕೃತವಾಗಿರುವ ಟಾಂಗಾದಲ್ಲಿ ಸ್ವತ: ರಿಷಿ ಆನಂದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ರಾಯಭಾರಿಗಳಾದ ಸಹನಾ ಕೂಡಿಗನೂರ, ಸಾಕ್ಷಿ ಹಿರೇಮಠ ಸೇರಿದಂತೆ ಇತರ ಅಧಿಕಾರಿಗಳು, ಸ್ವೀಪ್ ಸಮಿತಿ ಸದಸ್ಯರು ಕುಳಿತು ನಗರದಾದ್ಯಂತ ಸಂಚರಿಸುವ ಮೂಲಕ ಮತದಾನ ಜಾಗೃತಿ ಯೊಂದಿಗೆ ಮತದಾರರಲ್ಲಿ ಉತ್ಸಾಹ ಹುಮ್ಮಸ್ಸು ಮೂಡಿಸಿ,ಪ್ರಜಾ ಪ್ರಭುತ್ವದ ಹಬ್ಬದಲ್ಲಿ ಭಾಗವಹಿಸಿ ಮತದಾನ ಮಾಡುವಂತೆ ಪ್ರೇರೇಪಿಸಿ ದರು. ಜಾಥಾದುದ್ದಕ್ಕೂ ಡೊಳ್ಳು ಬಾರಿಸುವುದು ಆಕರ್ಷಣೀಯವಾಗಿತ್ತು. 40 ಟಾಂಗಾಗಳನ್ನೊಳಗೊಂಡ ಟಾಂಗಾ ಜಾಥಾವು ನಗರದ ಸೆಟ್ ಲೈಟ್ ಬಸ್ ನಿಲ್ದಾಣದಲ್ಲಿ ( ಹೊಸ ಬಸ್ ನಿಲ್ದಾಣ)ದಿಂದ ಆರಂಭಗೊಂಡು, ವಿಜಯಪುರದ ಗ್ಯಾಂಗ್ ಬಾವಡಿ, ಮಹಾತ್ಮಾ ಗಾಂಧಿ ಶಾಲೆ, ಮಾನಸ ರೆಸಿಡೆನ್ಸಿ, ದರ್ಗಾ ಕ್ರಾಸ್, ಚಾಲುಕ್ಯ ನಗರ, ಉಮದಿ ಸೂಪರ್ ಬಜಾರ್ ಎದುರಿನ ರಸ್ತೆ, ಮಹೇಶ್ವರಿ ಭವನ ರಸ್ತೆ, ರೀಲೈನ್ಸ್ ಮಾಲ್ ರಸ್ತೆ, ಮಾರವಾಡಿ ಕಾಲೋನಿ, ಸಿದ್ದೇಶ್ವರ ದೇವಸ್ಥಾನ, ಗಾಂಧಿ ವೃತ್ತ ಮಾರ್ಗವಾಗಿ ಸಂಚರಿಸಿ ಡಾ.ಬಿ.ಆರ್.ಅಂಬೇಡ್ಕರ್ ವೃತ್ತಕ್ಕೆ ತಲುಪಿ ಸಮಾವೇಶಗೊಂಡಿತು.ಟಾಂಗಾ ಜಾಥಾವು 8 ರಿಂದ 10 ಕಿ.ಮೀ.ವರೆಗೆ ಸಂಚರಿಸಿ ಜಾಗೃತಿ ಮೂಡಿಸಿತು. ರಸ್ತೆಯುದ್ದಕ್ಕೂ 'ಮಾಡಲೇಬೇಕು–ಮಾಡಲೇಬೇಕು ಮತದಾನ ಮಾಡಲೇಬೇಕು' ನಮ್ಮ ಮತ ನಮ್ಮ ಹಕ್ಕು, 'ಮೇ.7ರಂದು ಕಡ್ಡಾಯವಾಗಿ ಮತದಾನ ಮಾಡಿ' 'ಚುನಾವಣಾ ಪರ್ವ ನಮ್ಮ ಗರ್ವ' ಹೀಗೆ ಹತ್ತು ಹಲವಾರು ಮತದಾನ ಜಾಗೃತಿಯ ಘೋಷಣೆಗಳನ್ನು ಕೂಗಲಾಯಿತು. ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಪ ಆಯುಕ್ತ ಮಹಾವೀರ ಬೋರಣ್ಣವರ ನೆರೆದ ಎಲ್ಲರಿಗೂ ಮತದಾನ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಮತದಾನ ಅತ್ಯಂತ ಅಮೂಲ್ಯವಾದದ್ದು, ನನ್ನ ಒಂದು ಮತದಿಂದ ಏನಾಗುತ್ತದೆ ಎಂಬ ಅಸಡ್ಡೆ ಭಾವನೆ ತೋರಬಾರದು. ಒಂದು ಮತಕ್ಕೆ ದೇಶ ಕಟ್ಟುವ ಶಕ್ತಿಯಿದೆ. ಮತದಾರ ಪಟ್ಟಿಯಲ್ಲಿ ಹೆಸರು ನೊಂದಾಯಿಸಿಕೊಂಡ 18 ವರ್ಷ ಮೇಲ್ಪಟ್ಟ ಎಲ್ಲ ಮತದಾರರು ಮೇ.7 ರಂದು ನಡೆಯುವ ಪ್ರಜಾಪ್ರಭುತ್ವ ಹಬ್ಬದಲ್ಲಿ ಭಾಗವಹಿಸಿ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಸುಭದ್ರ ರಾಷ್ಟ್ರ ನಿರ್ಮಾಣದಲ್ಲಿ ಕೈ ಜೋಡಿಸುವಂತೆ ಕರೆ ನೀಡಿದರು.ದೇಶದ ಪ್ರಗತಿಯಲ್ಲಿ ಪ್ರತಿಯೊಬ್ಬ ನಾಗರಿಕರ ಪಾತ್ರ ಅತ್ಯಂತ ಮುಖ್ಯವಾಗಿದೆ. ದೇಶ ಕಟ್ಟಲು ಪ್ರತಿಯೊಬ್ಬರ ಮತ ಅಮೂಲ್ಯವಾಗಿದೆ. ದೇಶದ ಹಿತದೃಷ್ಟಿಯಿಂದ ಪ್ರತಿಯೊಬ್ಬರು ಪ್ರಜಾಪ್ರಭುತ್ವ ಹಬ್ಬದಲ್ಲಿ ಭಾಗವಹಿಸಿ ತಮ್ಮ ಕರ್ತವ್ಯ ನಿಭಾಯಿಸುವುದಲ್ಲದೇ ತಮ್ಮ ನೆರೆ ಹೊರೆಯವರನ್ನು ಮತದಾನಕ್ಕೆ ಪ್ರೇರೆಪಿಸಬೇಕು ಎಂದು ಅವರು ಹೇಳಿದರು.ಇದೇ ಸಂದರ್ಭದಲ್ಲಿ ಮತದಾನ ಜಾಗೃತಿಯಲ್ಲಿ ಶ್ರಮಿಸಿದ ಸ್ವೀಪ್ ಅಧಿಕಾರಿಗಳು,ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು, ಮಹಾನಗರ ಪಾಲಿಕೆ ಅಧಿಕಾರಿಗಳು ಸೇರಿದಂತೆ ಟಾಂಗಾ ಅಭಿಯಾ ನದಲ್ಲಿ ಭಾಗವ ಹಿಸಿ ಟಾಂಗಾ ಚಾಲಕರಿಗೆ ಅವರು ಕೃತಜ್ಞತೆಯನ್ನು ಸಲ್ಲಿಸಿದರು.ಜಾಥಾ ಕಾರ್ಯಕ್ರಮದಲ್ಲಿ ಸ್ವೀಪ್ ಜಿಲ್ಲಾ ನೋಡಲ್ ಅಧಿಕಾರಿ ಸಿ ಆರ್ ಮುಂಡರಗಿ,ಜಿಲ್ಲಾ ಪಂಚಾಯತ್ ಉಪ ಕಾರ್ಯ ದರ್ಶಿ ನಿಂಗಪ್ಪ ಗೋಠೆ,ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಬಸವರಾಜ ಹುಬ್ಬಳ್ಳಿಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸೇರಿ ಇತರರು ಉಪಸ್ಥಿತರಿದ್ದರು.

## ಇಂದು ಮತದಾನ ಹಿನ್ನೆಲೆಯಲ್ಲಿ ವೇತನ ಸಹಿತ ರಜೆ

ವಿಜಯಪುರ ಮೇ 6 : ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಹಿನ್ನೆಲೆ ಮೇ.7 ಮತದಾನದಂದು ಜಿಲ್ಲೆಯಾದ್ಯಂತ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951ರ ಪ್ರಜಾ ಪ್ರತಿನಿಧಿ ಕಾಯ್ದೆ , ಸೆಕ್ಷನ್ 135(ಬಿ) ರಡಿ ಹಾಗೂ ಕೈಗಾರಿಕೆ ಸಂಸ್ಥೆಗಳ ( ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ–1963 ಕಲಂ 3(ಎ)ರನ್ವಯ ಅರ್ಹ ಮತದಾರರಿಗೆ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಮಾಲೀಕರು, ನಿಯೋಜಕರು ಅನುವು ಮಾಡಿ ಕೊಡಬೇಕಾಗಿರುತ್ತದೆ.

ಆದ್ದರಿಂದ ಚುನಾವಣೆ ನಡೆಯುವ ಕ್ಷೇತ್ರಗಳ ವ್ಯಾಪ್ತಿಯ ಎಲ್ಲಾ ಕಾರ್ಖಾನೆಗಳು ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಸದರಿ ದಿನದಂದು ಕಾಯ್ದೆಯನ್ವಯ ಅರ್ಹ ಕಾರ್ಮಿಕರು ಮತದಾನ ಮಾಡಲು ಅನುಕೂಲವಾಗುವಂತೆ ವೇತನ ಸಹಿತ ರಜೆ ನೀಡುವಂತೆ ಈ ಮೂಲಕ ತಿಳಿಸಲಾಗಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆ, ನಿಯೋಜಕರು ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದೆಂದು ವಿಜಯಪುರ ಕಾರ್ಮಿಕ ಇಲಾಖೆಯ ವಿಭಾಗೀಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದರೆ.

## ಪ್ರಜಾಪ್ರಭುತ್ವದ ಹಬ್ಬಕ್ಕೆ ಸಜ್ಜಾದ ಮತಗಟ್ಟೆಗಳು

# ಪ್ರಜಾಪ್ರಭುತ್ವ ಹಬ್ಬದಲ್ಲಿ ಭಾಗಿಯಾಗಿ ಕಡ್ಡಾಯ ಮತದಾನ ಮಾಡಿ ರಾಹುಲ್ ಶಿಂಧೆ

(1 ನೇ ಪುಟದಿಂದ)

ಚೇರ್, ವಾಹನದ ಸೌಲಭ್ಯ ಹಾಗೂ ವಿಶೇಷ ಚೇತನ ಸ್ನೇಹಿ ಶೌಚಾಲಯ, ಸಂಕೇತ ಫಲಕಗಳು ಇತ್ಯಾದಿ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ರಾಹುಲ್ ಶಿಂಧೆ ತಿಳಿಸಿದ್ದಾರೆ.

ಜಿಲ್ಲೆಯಾದ್ಯಂತ ಒಂದು ಲಕ್ಷಕ್ಕು ಅಧಿಕ ಯುವ ಮತದಾರರು ನೊಂದಣಿಯಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಯುವ ಮತದಾರರಿರುವ ಮತಗಟ್ಟೆಗಳಲ್ಲಿ ಯುವಕರಿಗಾಗಿ ಯುವಜನ ನಿರ್ವಹಣೆಯ ಮತಗಟ್ಟೆಗಳನ್ನು ಜಿಲ್ಲೆಯಾದ್ಯಂತ ಹದಿನೆಂಟು ಯುವ ಮತಗಟ್ಟೆಗಳನ್ನು ನಿರ್ಮಿಸಲಾಗಿದೆ. ಮೊದಲಬಾರಿಗೆ ಮತದಾನ ಮಾಡುವ ಯುವಕರನ್ನು ಪ್ರೋತ್ಸಾಹಿಸಲು ಈ ಮತಗಟ್ಟೆ ನಿರ್ಮಾಣ ಮಾಡಲಾಗಿದೆ. ಆಯಾ ಮತಕ್ಷೇತ್ರಕ್ಕೆ ಸಂಬಂಧಿಸಿದ ವಿಶೇಷ ಸಾಧನೆ ಮಾಡಿದ ವ್ಯಕ್ತಿ, ಸ್ಥಳಿಯ ಜನಪದ ಕಲೆ, ಪ್ರೇಕ್ಷಣಿಯ ಸ್ಥಳ ಧ್ಯೇಯಗಳನ್ನು ಇಟ್ಟುಕೊಂಡು ಮತದಾರರಿಗೆ ಆಕರ್ಷಣೆಯುವಾಗಿ ಕಾಣಲು ಹದಿನೆಂಟು ಮತಗಟ್ಟೆಗಳನ್ನು ನಿರ್ಮಿಸಲಾಗಿದೆ.

ಜಿಲ್ಲೆಯಲ್ಲಿ ಒಟ್ಟು 4524 ಮತಗಟ್ಟೆಗಳಲ್ಲಿ ಕೂಡ ವೈದ್ಯಕೀಯ ಕಿಟ್, ನೀರಿಕ್ಷಣಾ ಕೊಠಡಿ, ಕುಡಿಯುವ ನೀರು, ಸಹಾಯವಾಣಿ ಕೇಂದ್ರ, ನೆರಳಿಗಾಗಿ ಶಾಮಿಯಾನ ಶೌಚಾಲಯ ಹಾಗೂ ಹಿರಿಯ ನಗಾರಿಕರು, ದುರ್ಬಲ ಮತದಾರರು ಮತ್ತು ವಿಶೇಷ ಚೆತನ ಮತದಾರರಿಗೆ ಅನುಕೂಲವಾಗುವಂತೆ ಎಲ್ಲ ಸೌಲಭ್ಯಗಳನ್ನು ಒದಗಿಸಲಾಗಿದ್ದು, ಮೇ 7 ರಂದು ಎಲ್ಲ ಮತದಾರರು ಕಡ್ಡಾಯವಾಗಿ ತಪ್ಪದೇ ಮತದಾನ ಮಾಡಬೇಕಾಗಿ ಚಿಕ್ಕೋಡಿ ಲೋಕಸಬಾ ಮತಕ್ಷೆತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾದ ರಾಹುಲ್ ಶಿಂಧೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.